ತಿಳುವಳಿಕೆ ಪರಾ.—ಬಂದು ಸರ್ವೆ ನಂಬರು ಪೈಕಿ ಕೆಲವು ಜಾಗಾಕ್ಕೆ ದರಖಾಸ್ತು ಬಂದು ಕಬ್ಜಾ ಅಳತೆ ಪ್ರಕಾರ ಅಂದಾಜು ಎಕರೆ ಮೇಲೆ ಅಪ್ಸೆಟ್‌ಪ್ರೈಸ್ ವಸೂಲಾದ್ದರಲ್ಲಿ ಕರಾರು ವಾಕಾ ಮೋಜಣೀ ಎಕರಿಗೆ ಗಣನೀಯವಾದಷ್ಟು ಕಮ್ಮಿ ಜಾಸ್ತೀ ಆದರೆ ಜಾಸ್ತೀ ಎಕರೆ ಸಂಬಂಧ ಅಪ್ಸೆಟ್‌ಪ್ರೈಸ್ ವಸೂಲೀ ಕೊಡುವದಕ್ಕೆ ಆಗಲಿ ಕಮ್ಮಿ ಎಕರೆ ಸಂಬಂಧ ವಾಪಸ್ ಪಡೆಯುವದಕ್ಕೆ ಆಗಲಿ ಜರ್ಮಾ ಹಿಡುವಳಿದಾರನು ಬದ್ಧ ವ ಆರ್ಹನಾಗಿರಬೇಕು.

ಹೆಚ್. ಹೆಚ್. ಸ್ಪಾರ್ಕ್ಸ್,
ಡೆಪ್ಯೂಟಿ ಕಮ್ಮಿಷನರ್.

ಮೈಸೂರ ಗೆಜೆಟ್ ಚಂದಾ ದರ ವಗೈರೆ.

ತಾರೀಖು 26ನೇ ಜನವರಿ 1889.

ಮೈಸೂರ ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ, ಮತ್ತು ಸದರೀ ಗೆಜೆಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸು ಮುಂತಾದವುಗಳೂ ಬೆಂಗಳೂರಲ್ಲಿರುವ ಮೈಸೂರ ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರೆಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ.	ಟಪ್ಪಾಲ್ ಹಾಸಲು ಮೈಸೂರು ಕೀವೆ ಶಿವಾಯಿ ಇತರ ಸ್ಥಳಗಳಿಗೆ.
	ರೂ. ಆ.	ರೂ. ಆ.
ಇಂಗ್ಲೀಷು ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3 8	1 12
ಇಂಗ್ಲೀಷು ಮತ್ತು ಕನ್ನಡ ಸುದಾ 12 ತಿಂಗಳಿಗೆ	7 0	3 8
ಚಷ್ ಮಾಹೇ ಯಾ ಕ್ವಾರ್ಟರಿಗೆ		ದಾವಾಷಾಯಿ ಪ್ರಕಾರ ದರಗಳು
ಚಾಲ್ತಿ ವರುಷದ ಗೆಜೆಟ್ ಕಾಪಿ 1ಕ್ಕೆ ರೆಗ್ಯುಲೇರ್ಸ್ ಯಾ ಆಕ್ಟುಗಳು ಯಾವದೂ ಇಲ್ಲವಿದ್ದರೆ.		0 8

ಹಿಂದಿನ ವರುಷದ ಗೆಜೆಟ್ ಕಾಪಿಗಳಿಗೆ ಚಾರ್ಜು ಕೇಳಿ ತಿಳಿದುಕೊಳ್ಳಬಹುದು.

1891ನೇ ಇಸವಿ ಜುಲೈ 2ನೇ ಮತ್ತು ಂ 155ನೇ ನಂಬರ್ ಉಳ್ಳ ಗವರ್ಮೆಂಟ್ ಇಸ್ತಿಹಾರ್‌ನಾಮೆ ಅನುಸರಿಸಿ ಕನ್ನಡ ಗೆಜೆಟ್ ಮೈಸೂರು ಕೀಮೆಯಲ್ಲಿನ ಪಟೇಲ್ ಶಾನುಭೋಗರುಗಳಿಗೆ ಅರ್ಧ ದರಕ್ಕೆ ಕೊಡಲ್ಪಡುವದು; ಆದರೆ ಅಂಥಾ ಪಟೇಲ್, ಶಾನುಭೋಗರುಗಳ ಆ ಕಾಲದಲ್ಲಿ ವಾಸ್ತವ್ಯವಾಗಿ ಪಟೇಲಿ ಯಾ ಶಾನುಭವಿಕೆ ಕೆಲಸ ನೋಡುತಲಿದ್ದಾರೆಂಬದಾಗಿ ಆಯಾ ತಾಲ್ಲೂಕು ಅಮಲ್ದಾರರಿಂದ ವಂದು ಸರಟಿಫಿಕೇಟನ್ನ ಪಡೆದು ಹಾಜರ್ಮಾಡಬೇಕಾಗಿರುತ್ತೆ.

1895ನೇ ಇಸವಿ ಜೂನ್ 21ನೇ ಮತ್ತು ಂ 24205—6—ಜಿ. 6700ನೇ ನಂಬರ್ ಗವರ್ಮೆಂಟ್ ಆರ್ಡರ್ ಅನುಸರಿಸಿ ಮೇಲ್ಕಂಡ ರಿಯಾಯತಿ ದರವು, ನಾಡ ಪಟೇಲರಿಗೂ ಲಗಾವ್ ಮಾಡಲ್ಪಟ್ಟಿರುತ್ತೆ.

ಸಿವಿಲ್ ಕೋರ್ಟ್‌ನಿಂದ ಕೊಡಲ್ಪಡುವ 1860ನೇ ಇಸವಿ XXVIIನೇ ಆಕ್ಟು ಅನುಸರಿಸಿ ಸರ್ಟಿಫಿಕೇಟಿ ಬಗ್ಗೆ ನೋಟಿಸ್‌ಗಳು:—

ಮೊದಲನೇ ದಫಾ ಫಾಯಿಷ್ ಮಾಡತಕ್ಕ ಬಗ್ಗೆ ಇಂಗ್ಲೀಷು ಅಥವಾ ಕನ್ನಡ	..	2	8
ಎರಡನೇ ಸಲ ವ ಆ ತರುವಾಯ ಪ್ರತಿ ಆವರ್ತಿಗೂ ಡಿಟೋ	.. ..	1	4
ಸಿವಿಲ್ ಪ್ರೊಸಿಡ್ಯೂರ್ ಕೋಡಿನ 347ನೇ ಸೆಕ್ಷನ್ ಅನುಸರಿಸಿ ದಿವಾಳೀ ಅಪ್ಲಿಕೇಷನ್‌ಗಳ ಬಗ್ಗೆ ನೋಟಿಸ್‌ಗಳಿಗೆ :—			
ಮೊದಲನೇ ಸಲಕ್ಕೆ	.. .. ..	5	0
ಎರಡನೇ ವ ಆ ತರುವಾಯ ಪ್ರತಿ ದಫಾಕ್ಕೆ	.. ..	2	8
ಸಿವಿಲ್ ಪ್ರೊಸಿಡ್ಯೂರ್ ಕೋಡಿನ 354ನೇ ಸೆಕ್ಷನ್ ಅನುಸರಿಸಿ ಸಿವಿಲ್ ಕೋರ್ಟುಗಳಿಂದ ಕೊಡಲ್ಪಡುವ ದಿವಾಳೀ ಹುಕುಂಗಳು ಬಗರ್ ಚಾರ್ಜ್ ಪ್ರಕಟಿಸಲ್ಪಡುತವೆ.			
ಡ್ಯೂಪ್ಲಿಕೇಟ್ ಕಾಫೀ ಪಟ್ಟೆ ವಗೈರೇ ಕೊಡುವ ಬಗ್ಗೆ ರೆವಿನ್ಯೂ ಆಫಿಸರ್‌ಗಳು ಕೊಡುವ ನೋಟಿಸ್‌ಗಳಿಗೆ :—			
ಮೊದಲನೇ ಸಲಕ್ಕೆ . ಪುಟ 1ಕ್ಕೆ	..	10	0
ಎರಡನೇ ಸಲ ವ ಆ ತರುವಾಯ ಪ್ರತಿ ಸಲಕ್ಕೂ ”	..	5	0
ಖಾಸಗೀ ಪ್ರಕಟನೆಗಳಿಗೆ ಈ ಕೆಳಗೆ ಕಾಣಿಸಲ್ಪಡುವ ದರಗಳ ಪ್ರಕಾರ ಚಾರ್ಜ್ ಮಾಡಲ್ಪಡುತ್ತೆ:—			
ಮೊದಲನೇ ದಫಾ ಇಂಗ್ಲೀಷ್ ಅಥವಾ ಕನ್ನಡಕ್ಕೆ ಪಬ್ಲಿ 1ಕ್ಕೆ	..	0	8
ಎರಡನೇ ದಫಾ ಡಿಟೋ ಡಿಟೋ	..	0	6
ಮೂರನೇ ವ ಆ ತರುವಾಯ ಪ್ರತಿ ಸಲಕ್ಕೆ	.. ..	0	4

ಪರಾ.—ಚಂದಾ ವಗೈರೇ ಬಗ್ಗೆ ಪೋಸ್ಟೇಜ್ ಲೇಬಿಲ್ಲು ಕಳುಹಿಸಲ್ಪಟ್ಟ್ಯಾಗ, ರೂಪಾಯಿಗ ವಂದಾಣೆ ಯಂತೆ ಜಾಸ್ತೀ ಲೇಬಿಲ್ಲು ಕಳುಹಿಸಲ್ಪಡತಕ್ಕದ್ದು.

ಗವರ್ಮೆಂಟ್ ಆರ್ಡರ್ ಪ್ರಕಾರ ತಮಾಂ ಚಂದಾ ಮೊಬಲಗುಗಳೂ, ಪ್ರಕಟನೇ ಚಾರ್ಜುಗಳೂ ಮುಂಗಡವಾಗಿ ಪಾವತಿ ಮಾಡಲ್ಪಡಬೇಕು.

ಸರ್ಕಾರಿಯಾಗಿ ಗೆಜೆಟ್ ಪಡೆಯುವ ಬಗ್ಯಾದ ದರಖಾಸ್ತುಗಳು ಮೈಸೂರ್ ಗವರ್ಮೆಂಟ್ ಜನರಲ್ ಮತ್ತು ರೆವಿನ್ಯೂ ಇಲಾಖೆ ಸೆಕ್ರಿಟೆರಿಯವರಿಗೆ ಕಳುಹಿಸಲ್ಪಡತಕ್ಕದ್ದು.

ಗೆಜೆಟ್ ತಲಪಲಿಲ್ಲವೆಂಬ ಫಿರ್ಯಾದುಗಳು ಇದರಡಿ ರುಜು ಮಾಡಿರುವವರಿಗೆ ಅದು ತಲಪಬೇಕಾದ ತಾರೀಖು ಲಾಗಾಯತು ಒಂದು ವಾರದ ಒಳಗಾಗಿ ತಿಳಿಸಲ್ಪಡಬೇಕು.

ಮೈಸೂರ ಗೆಜೆಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸ್ ವ ಇಸ್ತಿಹಾರ್‌ನಾಮೆಗಳೂ ಆ ಗೆಜೆಟ್ ಛಾಪಿಸಲ್ಪಡುವ ಹಿಂದಿನ ಮಂಗಳವಾರದ ದಿವಸ ಮಧ್ಯಾನ್ಹ 12 ಘಂಟೆ ವಳಗಾಗಿ ಕಂಪ್ಟ್ರೊಲರ್ ಆಫಿಸಿಗೆ ತಲಪಬೇಕಾಗಿರುತ್ತೆ, ಆ ತರುವಾಯ ಕಳುಹಿಸಲ್ಪಡುವ ಯಾ ತಲಪುವ ಕಾಗದಗಳು, ಕೆಲಸ ನಿರ್ವಾಹಕ್ಕೆ ಅನುಕೂಲವಾಗಿದ್ದರೇನೇ ಹೊರ್ತು ಅನ್ಯಥಾ ಅದೇ ವಾರದ ಗೆಜೆಟ್ಟಿನಲ್ಲಿ ಛಾಪಿಸಲ್ಪಡುತ್ತೆಂಬ ಖಾತರಿ ಯಿಲ್ಲ.

ತಾರೀಖು 26ನೇ ಆಗಸ್ಟ್ 1896.

ಗೆಜೆಟ್ ಚಂದಾದಾರರು ಚಂದಾ ಹಣವನ್ನು ಪೋಸ್ಟ್‌ಆಫಿಸ್ ಮನಿಆರ್ಡರ್ ಮೂಲಕ ಕಳುಹಿಸುತ್ತಾ ಅವರ ಹೆಸರು ಸರಿಯಾದ ವಿಳಾಸ ಮುಂತಾದ ತಪ್ಸೀಲ್ ತಿಳಿಸದೇಲೂ ಮತ್ತು ರಿಕಾರ್ಡಿನಲ್ಲಿ ಯಿಡುವದಕ್ಕೆ ವಿಶೇಷ ಅನನುಕೂಲವಾಗಿರುಂಥಾ ಕೂರ್ಪಗಳಿಗೆ ಮೇಲೆ ಅಸ್ಪಷ್ಟವಾಗಿ ಬರಿಯುವದರಿಂದಲೂ ವಿಶೇಷ ಗಲಾಟೆಗೆ ಆಸ್ಪದವಾಗಿರುವದರಿಂದ ಸರ್ವರಿಗೂ ತಿಳಿಸುವದೇನಂದರೆ,—ಯಲ್ಲಾ ತಾಲ್ಲೂಕು ಖಜಾನೆಗಳಲ್ಲಿಯೂ, ಗೆಜೆಟ್ ಚಂದಾ ಮೊಬಲಗು ತೆಗದುಕೊಂಡು ರಸೀತಿ ಕೊಡುವ ಬಗ್ಯಾಗಿ ಆಜ್ಞೆ ಯಿರುವದ್ದರಿಂದ ಇನ್ನು ಮೇಲೆ ಮೈಸೂರ್ ಶೀಮೆ ಅಲ್ಲದ ಇತರ ಸ್ಥಳಗಳಿಂದ ಬರುವ ಮನಿಆರ್ಡರ್ ಹೊರ್ತಾಗಿ ಅನ್ಯಥಾ ಆ ಬಗ್ಯಾಗಿ ಈ ಆಫಿಸಿಗೆ ಕಳುಹಿಸಲ್ಪಡುವ ಯಾವ ಮನಿಆರ್ಡರುಗಲಿ ಈ ಆಫಿಸಿನಲ್ಲಿ ಅಂಗೀಕರಿಸಲ್ಪಡಲಾರದು ಮತ್ತು ಪೋಸ್ಟ್ ಕಾರ್ಡ್ ಮೂಲಕ ಅಥವಾ ನೋಟ್ ಪೇಪರಿಗಿಂತಲೂ ಕಮ್ಮಿಯಾದ ಕಾಗದ್ದಲ್ಲಿ ಬರಿಯಲ್ಪಡುವ ಯಾವ ಅಂಶಕ್ಕೂ ನಿಗೆ ಕೊಡಲ್ಪಡಲಾರದು.

ತಾರೀಖು 3ನೇ ನವಂಬರ್ 1896.

ಇದರಿಂದ ತಿಳಿಯಪಡಿಸುವದೇನಂದರೆ, ಮೈಸೂರ ಗೆಜೆಟ್ ಕಂಪ್ಟ್ರೊಲರವರ ಹೆಸರಿಗೆ ಎರಡು ಮನೀ ಆರ್ಡರುಗಳು ಬಂದಿರುತ್ತ. ವೆ. ಸದರೀ ಮನೀ ಆರ್ಡರ್ ಕೂರ್ಪಗಳಲ್ಲಿ ಮನೀ ಆರ್ಡರ್ ಕಳುಹಿಸಿದವರ ಹೆಸರು ವಿಳಾಸ ಯಾವ ಬಗ್ಯೆ ಮನೀ ಆರ್ಡರ್ ಕಳುಹಿಸಿದ್ದು ಈ ವಗ್ಯೆರೆ ತಪಶೀಲುಗಳು ಇಲ್ಲ. ಸದರೀ ಮನೀ ಆರ್ಡರುಗಳು ಕಳುಹಿಸಿದವರು ಅಪುಗಳನ್ನ ಯಾತಕ್ಕೊಸ್ಕರ ಕಳುಹಿಸಿರು ತ್ತಾರೆಯೋ ಆ ತಪಶೀಲು ವಿವರವಾಗಿ ಈ ತಾರೀಖು ಲಾಗಾಯತು ಬಂದು ತಿಂಗಳು ಒಳಗಾಗಿ ತಿಳುಹಿಸುವಷ್ಟಲ್ಲದೆ ಅವುಗಳಿಗಾಗಿ ಪಡೆದಿರುವ ರಸೀತಿಯನ್ನು ಈ ಆಫಿಸಿನಲ್ಲಿ ಈ ತಾರೀಖು ಲಾಗಾಯತು ಬಂದು ತಿಂಗಳ ವಳಗಾಗಿ ಹಾಜರ್ಮಾಡದಿದ್ದರೆ ನಂತರ ಅಂಥವರ ಫಿರ್ಯಾದು ಅಂಗೀಕರಿಸಲಾರದು.

ಸಿ. ರಾಘವಾಚಾರ್ಲು,
ಮೈಸೂರ್ ಗೆಜೆಟ್ ಕಂಪ್ಟ್ರೊಲರ್.

ನೋಟೀಸ್.

ತಾರೀಖು 12—1—96.

ಕಡೂರು ತಾಲ್ಲೂಕು ಬ್ರಹ್ಮಸಮುದ್ರ ಗ್ರಾಮದ ಸರ್ವೇನಂಬರು 170—171—172ನೇ ಬಾಗಾಯತು ತೋಟಗಳು ಮತ್ತು ಖಾನೇಷುಮಾರೀ ನಂಬರು 11ನೇ ಹಂಚಿನಮನೆ ಇಪ್ಪುಗಳ ಮೇಲೆ ನನ್ನ ಮಗನಾದ ಶ್ರೀರಂಗಭಟ್ಟನ ಹಕ್ಕು ಯಿರುವದ್ದರಿಂದಲೂ ಈ ಸ್ವತ್ತುಗಳು ಪೂರ್ವಿಕರಿಂದ ಬಂದದ್ದಾದ್ದರಿಂದಲೂ, ಮತ್ತು ಪಿತರಾರ್ಜಿತವಾದ್ದರಿಂದಲೂ ಸಹ ನನ್ನ ಗಂಡದಿರಾದರಂಗಾ ಭಟ್ಟರವರು ಮತ್ತು ಸೂರ್ಯನಾರಾಯಣಭಟ್ಟರವರ ಮಕ್ಕಳು ಕೃಷ್ಣಪುರಾಣೀಕರವರೂ ಸಹ ಸಮಭಾಗವಾಗಿ ಅನುಭವಿಸುತ್ತಾರೆ. ಮೇಲ್ಕಂಡ ಸ್ವತ್ತುಗಳೆಲ್ಲಾ ನನ್ನ ಮಗ ಶ್ರೀರಂಗಭಟ್ಟನೇ ಪೂರಾ ಹಕ್ಕುದಾರನಾಗಿರುವದ್ದರಿಂದ ಈ ಸ್ವತ್ತುಗಳನ್ನು ಕೃಷ್ಣಪುರಾಣೀಕರವರು ಖರೀದಿ ಮಾಡುತ್ತಾರಾಗಿ ವರ್ತಮಾನ ಕೇಳುತ್ತೇನೆ. ಈ ಸ್ವತ್ತುಗಳನ್ನು ಯಾರು ಕ್ರಯಕ್ಕೆ ಪಡಿಯುತ್ತಾರೋ ಅವರು ಮುಂದೆ ಆಗತಕ್ಕ ಕೋರ್ಟ್ ಖರ್ಚು ವಗ್ಯೆರೇ ನಷ್ಟಕ್ಕೆ ಸಹ ಬಾಧ್ಯರಾಗಿರುತ್ತಾರೆ. ಈಗ ಶ್ರೀರಂಗಭಟ್ಟನು 10 ವರುಷ ವಯಸ್ಸುಳ್ಳವನಾಗಿದ್ದಾನೆ. ಇದ್ದರಿಂದ ಗಾರ್ಡಿಯ್ಯನಾಗಿ ಈ ಸಂಗತಿಯನ್ನೆಲ್ಲಾ ಪ್ರಕಟಪಡಿಸಿ ಇರುತ್ತೇನೆ.

ನಂಜಮ್ಮನ ಗರೇ ರಾಜು.

Mysore Govt. Central Press, Bangalore.—1896.